ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಸರ್ವೋಚ್ಚ ನ್ಯಾಯಾಲಯದ ತೀರ್ಪಿನ ಪ್ರಕಾರ ಜೂನ್ 1993ರ ಒಳಗಾಗಿ ಜಿಲ್ಲಾ ಪರಿಷತ್ ಮತ್ತು ಮಂಡಲ ಪಂಚಾಯತಿಗಳಿಗೆ ಚುನಾವಣೆ ನಡೆಸುವುದಾಗಿ ಹಿಂದೆ ಆಶ್ವಾಸನೆ ಕೊಟ್ಟಿರುವುದು ಸರ್ಕಾರದ ಗಮನದಲ್ಲಿದೆಯೇ ?

ಆ) ಹಾಗಿದ್ದಲ್ಲಿ, ನ್ಯಾಯಾಲಯದ ತೀರ್ಪನ್ನು ಗೌರವಿಸಿ ಜೂನ್ 1993ರೊಳಗಾಗಿ ಸ್ಥಳೀಯ ಸಂಸ್ಥೆಗಳಿಗೆ ಚುನಾವಣೆ ನಡೆಸಲು ಸರ್ಕಾರವು ಕ್ರಮ ತೆಗೆದುಕೊಳ್ಳುವುದೇ ?

ಶ್ರೀ ಎಂ. ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು):

ಅ) ಹೌದು.

ಆ) 73ನೇ ಸಂವಿಧಾನ ತಿದ್ದುಪಡಿಗೆ ಅನುಗುಣವಾಗಿ ಒಂದು ಸಮಗ್ರ ವಿಧೇಯಕವನ್ನು ವಿಧಾನ ಮಂಡಲದಲ್ಲಿ ಮಂಡಿಸಲಾಗುವುದು. ಈ ನೂತನ ವಿಧೇಯಕದಂತೆ ಚುನಾವಣೆಗಳನ್ನು 1993ನೇ ವರ್ಷದಲ್ಲಿ ಆದಷ್ಟು ಜಾಗ್ರತೆ ನಡೆಸಲಾಗುವುದು.

ಕೊಡಗು ಜಿಲ್ಲೆಯ ಅಕ್ರಮ ಭೂಮಿಯನ್ನು ಸಕ್ರಮ ಮಾಡಲು ಇರುವ ತೊಡಕುಗಳು

332 (562) ಶ್ರೀ ಎ. ಎಂ. ಬೆಳ್ಳಿಯಪ್ಪ (ಸೋಮವಾರಪೇಟೆ)

ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಕೊಡಗು ಜಿಲ್ಲೆಯಲ್ಲಿ ಅಕ್ರಮ ಭೂಮಿ ಸಕ್ರಮಗೊಳಿಸುವಾಗ ಕೆಲವೇ ಕಾಫಿ ಗಿಡಗಳು ಇದ್ದರೂ ಅದನ್ನು ಕಾಫಿ ತೋಟ ಎಂದು ಪರಿಗಣಿಸಲಾಗುತ್ತಿರುವುದರಿಂದ ಸಣ್ಣ ರೈತರು ಮತ್ತು ಬಡ ಜನರಿಗೆ ತುಂಬಾ ತೊಂದರೆಯಾಗುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ?

ಆ) ಹಾಗಿದ್ದಲ್ಲಿ ಈ ಸಮಸ್ಯೆಯನ್ನು ಬಗೆಹರಿಸಲು ಸರ್ಕಾರದವರು ತೆಗೆದುಕೊಂಡ ಕ್ರಮಗಳೇನು ?

ಶ್ರೀ ಎಂ. ರಾಜಶೇಖರಮೂರ್ತಿ (ಕಂದಾಯ ಸಚಿವರು):

ಅ ಮತ್ತು ಆ) ಇಲ್ಲ, ಅಂತಹ ಯಾವುದೇ ತೊಂದರೆಗಳು ಇರುವುದಿಲ್ಲ. ಕೆಲವು ಕಾಫಿ ಗಿಡಗಳನ್ನು ನೆಟ್ಟಿದ್ದರೂ, ಹೆಚ್ಚಿನ ವಿಸ್ತೀರ್ಣದಲ್ಲಿ ಕುಷ್ಕಿ ವ್ಯವಸಾಯ ಮಾಡಿದ್ದಲ್ಲ, ಅದನ್ನು ಕುಷ್ಕಿ ಎಂದೇ ಪರಿಗಣಿಸಲಾಗುತ್ತಿದೆ. ಸಣ್ಣ ಮತ್ತು ಬಡರೈತರಿಗೆ ತೊಂದರೆಯಾಗದಂತೆ ಕ್ರಮ ಕೈಗೊಂಡಿದೆ.

ಸೋಮವಾರ ಪೇಟೆ ತಾಲ್ಲೂಕಿನ ತೋಟಗಾರಿಕೆ ಫಾರಂನ ಅವ್ಯವಸ್ಥೆ

333 (560): ಶ್ರೀ ಎ. ಎಂ. ಬೆಳ್ಳಿಯಪ್ಪ (ಸೋಮವಾರ ಪೇಟೆ)

ಮಾನ್ಯ ತೋಟಗಾರಿಕೆ ಕಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಸೋಮವಾರಪೇಟೆ ತಾಲ್ಲೂಕಿನ ಮದಲಾಪುರದಲ್ಲಿ ತೋಟಗಾರಿಕೆ ಫಾರಂನಲ್ಲಿ ಯಾವುದೇ ಅಭಿವೃದ್ಧಿ ಕಾರ್ಯ ಮಾಡದೆ (ಗಿಡಗಳು: ನರ್ಸರಿ) ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಆ) ಹಾಗಿದ್ದಲ್ಲಿ ಅದನ್ನು ಅಭಿವೃದ್ಧಿಪಡಿಸಲು ಸರ್ಕಾರದವರು ತೆಗದುಕೊಂಡ ಕ್ರಮಗಳೇನು ?

ಶ್ರೀ ಎ. ಕೃಷ್ಣಪ್ಪ (ತೋಟಗಾರಿಕಾ ರಾಜ್ಯ ಸಚಿವರು):

ಅ) ಬಂದಿದೆ.

ಆ) ಮದಲಾಪುರ ಕ್ಷೇತ್ರವು ರಕ್ಷಿತಾರಣ್ಯದ ಮಧ್ಯದಲ್ಲಿರುವುದರಿಂದ ಕಾಡಾನೆ ಮತ್ತು ಇತರೆ ಕಾಡು ಪ್ರಾಣಿಗಳಿಂದ ಪ್ರತಿದಿನ ನಾನಾ ತರಹದ ಹಾನಿಗೆ ತುತ್ತಾಗುತ್ತದೆ. ಇಲ್ಲಿ ಬೆಳೆಸಿರುವ ಗಿಡಮರಗಳನ್ನು ಪ್ರಾಣಿಗಳು ಕಿತ್ತು ಇಲ್ಲವೆ ತುಳಿದು ಹಾಳು ಮಾಡುತ್ತವೆ. ಈ ಕಾರಣದಿಂದ ಅಭಿವೃದ್ಧಿ ಕೆಲಸ ಕಾರ್ಯಗಳನ್ನು ಕೈ ಬಿಡಲಾಗಿದೆ.

ಕೊಡಗು ಜಿಲ್ಲೆಯಲ್ಲಿ ಖಾಲಿ ಇರುವ ಸರ್ವೇಯರ್ ಹುದ್ದೆಗಳ ಭರ್ತಿ

334 (561): ಶ್ರೀ ಎ. ಎಂ. ಬೆಳ್ಳಿಯಪ್ಪ (ಸೋಮವಾರಪೇಟೆ)

ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಕೊಡಗು ಜಿಲ್ಲೆಯಲ್ಲಿ ಸರ್ವೇಯರ್ ಹುದ್ದೆಗಳು ಖಾಲಿ ಇದ್ದು ಇದರಿಂದ ಸರ್ವೆ ಕೆಲಸಗಳು ಸರಿಯಾಗಿ ನಡೆಯದೆ ಸಾರ್ವಜನಿಕರಿಗೆ ತುಂಬಾ ತೊಂದರೆಯಾಗಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ ?

ಆ) ಹಾಗಿದ್ದಲ್ಲಿ, ಈ ಹುದ್ದೆಗಳನ್ನು ಭರ್ತಿ ಮಾಡಲು ಸಂದರ್ಶನ ನಡೆಸಲಾಗಿದೆಯೇ ಹಾಗೂ ಆ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು ?

ಶ್ರೀ ಎಂ. ರಾಜಶೇಖರಮೂರ್ತಿ (ಕಂದಾಯ ಸಚಿವರು):

ಅ) ಬಂದಿದೆ.

ಆ) ಹೌದು. ಆದಷ್ಟು ಬೇಗನೆ ಭರ್ತಿ ಮಾಡಲು ಪ್ರಯತ್ನಿಸಲಾಗುವುದು.

ರಾಜ್ಯದಲ್ಲಿರುವ ಸಬ್‌ರಿಜಿಸ್ಟ್ರಾರ್ ಕಛೇರಿಯಲ್ಲಿ ಸ್ಟ್ಯಾಂಪ್ ಪೇಪರ್ ಖರೀದಿಸುವಾಗ ನಡೆಯುವ ಅವ್ಯವಹಾರ.

335 (789): ಶ್ರೀ ಪಿ. ಸಿ. ಸಿದ್ದನಗೌಡರ್ (ಕಲಘಟಗಿ)

ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ರಾಜ್ಯದ ಯಾವ್ಯಾವ ಜಿಲ್ಲೆಗಳಲ್ಲಿ ಸಬ್‌ರಿಜಿಸ್ಟ್ರಾರ್ ಕಛೇರಿಯಲ್ಲಿ 10 ಸಾವಿರಕ್ಕಿಂತ ಹೆಚ್ಚಿನ ಸ್ಟ್ಯಾಂಪ್ ಪೇಪರ್‌ಕೊಳ್ಳುವ ವ್ಯವಸ್ಥೆ ಇರುವುದು ?

ಆ) ಈ ವ್ಯವಸ್ಥೆ ಬೆಂಗಳೂರಿನಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಇ) ಸಬ್‌ರಿಜಿಸ್ಟ್ರಾರ್ ಕಛೇರಿಯಲ್ಲಿ ಕಾಗದವನ್ನು ಖರೀದಿ ಮಾಡುವಾಗ ಭ್ರಷ್ಟಾಚಾರ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಈ) ಹಾಗಿದ್ದಲ್ಲಿ, ಇದರ ಬಗ್ಗೆ ಸರ್ಕಾರದವರು ಕೈಗೊಂಡ ಕ್ರಮವೇನು ?

ಉ) ಬೆಂಗಳೂರಿನಲ್ಲಿ ಹತ್ತು ಸಾವಿರಕ್ಕಿಂತ ಹೆಚ್ಚಿನ ಸ್ಟ್ಯಾಂಪ್ ಪೇಪರ್ ಕೊಳ್ಳಲು ಇರುವ ವ್ಯವಸ್ಥೆಯನ್ನು ರಾಜ್ಯದ ಇತರೆ ಜಿಲ್ಲೆಗಳಿಗೂ ವಿಸ್ತರಿಸಲು ಕ್ರಮ ಕೈಗೊಳ್ಳಲಾಗುವುದೇ ?